# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 434 (488)

**ಮಾನ್ಯ ಸದಸ್ಯರ ಹೆಸರು** : ಶ್ರೀಮತಿ ಹೇಮಲತಾ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು)

**ಉತ್ತರಿಸಬೇಕಾದ ದಿನಾಂಕ** : 14.08.2025

**ಉತ್ತರಿಸುವ ಸಚಿವರು** : ಕಾನೂನು, ನ್ಯಾಯ, ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲ್ಲೂಕಿನ ಶ್ರೀ ಅಂಜನಾದ್ರಿ ದೇವಸ್ಥಾನದ ಅಭಿವೃದ್ದಿ ಸಂಬಂಧ ರೋಪ್‌ವೇ ಮಾಡುವ ಪ್ರಸ್ತಾವನೆ ಯಾವ ಹಂತದಲ್ಲಿದೆ; ಇದಕ್ಕೆ ಅಗತ್ಯವಾದ ಜಮೀನು ಲಭ್ಯವಿದೆಯೇ; (ವಿವರ ಒದಗಿಸುವುದು) | ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲ್ಲೂಕಿನ ಶ್ರೀ ಅಂಜನಾದ್ರಿ ದೇವಸ್ಥಾನಕ್ಕೆ ಸಾರ್ವಜನಿಕ ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಲ್ಲಿ ರೋಪ್ ವೇ ಯನ್ನು ಇಲಾಖೆಯ ಅಂಗಸಂಸ್ಥೆಯಾದ ಕರ್ನಾಟಕ ಪ್ರವಾಸೋದ್ಯಮ ಮೂಲಸೌಲಭ್ಯ ನಿಗಮ (ಕೆ.ಟಿ.ಐ.ಎಲ್.) ಮೂಲಕ ಅಭಿವೃದ್ಧಿಪಡಿಸಲು ವಹಿವಾಟು ಸಲಹೆಗಾರರನ್ನಾಗಿ ಮೆ: ರೈಟ್ಸ್ ಲಿಮಿಟೆಡ್ ಸಂಸ್ಥೆಯನ್ನು ನೇಮಿಸಲಾಗಿರುತ್ತದೆ.<br><br>ಸದರಿ ಸಂಸ್ಥೆಯು ಈಗಾಗಲೇ ಸ್ಥಳ ತನಿಖೆಯನ್ನು ನಡೆಸಿ, ಕಾರ್ಯಸಾಧ್ಯತಾ ವರದಿ (Techno-Economic Feasibility Report) ಅನ್ನು ಸಲ್ಲಿಸಿದ್ದು, ಸದರಿ ವರದಿಯನ್ನು ನಿಯಮಾನುಸಾರ ಪರಿಶೀಲಿಸಿ, ರಾಜ್ಯ ಮಟ್ಟದ ಏಕಗವಾಕ್ಷಿ ಸಮಿತಿ (SLSWA) ಗೆ ಸಲ್ಲಿಸಿ ಅನುಮೋದನೆ ಪಡೆಯಲು ಕ್ರಮ ವಹಿಸಲಾಗುತ್ತಿದೆ.<br><br>ಅಂಜನಾದ್ರಿ ಬೆಟ್ಟದ ಮೇಲ್ಭಾಗದಲ್ಲಿನ ನಿಲ್ದಾಣಕ್ಕೆ (Upper Terminal Point) ಅರಣ್ಯ ಇಲಾಖೆಯ ಸರ್ವೇ ನಂ. 136/1 ರಲ್ಲಿ ಜಮೀನು ಲಭ್ಯವಿದ್ದು, ಅರಣ್ಯ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ ಪಡೆಯಲು ಕ್ರಮವಹಿಸಲಾಗುತ್ತಿದೆ.<br><br>ಬೆಟ್ಟದ ಕೆಳಭಾಗದ ನಿಲ್ದಾಣ (Lower Terminal Point ಕ್ಕೆ ಬೇಕಾದ ನಿವೇಶನವು ಸರ್ವೆ ನಂ. 52 ಹಾಗೂ 55 ಗಳಲ್ಲಿ ಒಟ್ಟು 5.15 ಗುಂಟೆ ಸರ್ಕಾರಿ ಜಮೀನು ಲಭ್ಯವಿರುತ್ತದೆ. |
| ಆ) | ಸದರಿ ರೋಪ್‌ವೇ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ಇಲ್ಲಿಯವರೆಗೆ ಎಷ್ಟು ಅನುದಾನವನ್ನು ಬಿಡುಗಡೆ ಮಾಡಿದೆ; (ವಿವರ ಒದಗಿಸುವುದು) | ಸದರಿ ಯೋಜನೆಯನ್ನು ಸಾರ್ವಜನಿಕ ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಲ್ಲಿ ಅಭಿವೃದ್ಧಿಪಡಿಸುತ್ತಿರುವುದರಿಂದ, ಈ ಯೋಜನೆಗೆ ಇಲಾಖೆಯಿಂದ ಯಾವುದೇ ಅನುದಾನವನ್ನು ಬಿಡುಗಡೆ ಮಾಡುವ ಅಗತ್ಯತೆ ಇರುವುದಿಲ್ಲ. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಇ) | ಸದರಿ ರೋಪ್‌ವೇ ಮಾಡುವುದರಿಂದ ದೇಶ ವಿದೇಶದಿಂದ ದೇವಸ್ಥಾನಕ್ಕೆ ಭೇಟಿ ನೀಡುವವರ ಸಂಖ್ಯೆಯಲ್ಲಿ ಗಣನೀಯ ಪ್ರಮಾಣದಲ್ಲಿ ಏರಿಕೆಯಾಗಿ ಪ್ರವಾಸೋದ್ಯಮ ಅಭಿವೃದ್ಧಿಯಾಗಿ ರಾಜ್ಯಕ್ಕೆ ಆದಾಯ ಹೆಚ್ಚುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಈ) | ದೇವಸ್ಥಾನಕ್ಕೆ ಆಗಮಿಸುವ ವೃದ್ಧರು, ವಿಶೇಷ ಚೇತನರು ಹಾಗೂ ಇನ್ನಿತರ ಭಕ್ತಾದಿಗಳಿಗೆ ರೋಪ್‌ವೇ ಮಾಡುವುದರಿಂದ ಅನುಕೂಲವಾಗುವುದರಿಂದ ಈ ಯೋಜನೆಯನ್ನು ಕಾರ್ಯಗತಗೊಳಿಸುವ ಚಿಂತನೆ ಸರ್ಕಾರಕ್ಕೆ ಇದೆಯೇ ಅಥವಾ ಇಲ್ಲವೇ; ಇದಲ್ಲಿ, ಯಾವ ಕಾಲಮಿತಿಯೊಳಗೆ ಈ ಯೋಜನೆಯನ್ನು ಕಾರ್ಯಗತಗೊಳಿಸಲಾಗುವುದು? ವಿವರ ಒದಗಿಸುವುದು) | ದೇವಸ್ಥಾನಕ್ಕೆ ಆಗಮಿಸುವ ವೃದ್ಧರು, ವಿಶೇಷ ಚೇತನರು ಹಾಗೂ ಇನ್ನಿತರ ಭಕ್ತಾದಿಗಳಿಗೆ ರೋಪ್‌ವೇ ಮಾಡುವುದರಿಂದ ಅನುಕೂಲವಾಗುವುದರಿಂದ ಈ ಯೋಜನಯನ್ನು ಕಾರ್ಯಗತಗೊಳಿಸುವ ಚಿಂತನೆ ಸರ್ಕಾರಕ್ಕೆ ಇರುತ್ತದೆ. ಈ ರೋಪ್-ವೇ ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ವಹಿವಾಟು ಸಲಹೆಗಾರರು ಸಲ್ಲಿಸಿರುವ ಕಾರ್ಯಸಾಧ್ಯತಾ ವರದಿಯನ್ನು ನಿಯಮಾನುಸಾರ ಪರಿಶೀಲಿಸಿ, ರಾಜ್ಯ ಮಟ್ಟದ ಏಕಗವಾಕ್ಷಿ ಸಮಿತಿ (SLSWA) ಗೆ ಸಲ್ಲಿಸಿ ಅನುಮೋದನೆ ಪಡೆದು ಯೋಜನೆಯ ಅನುಷ್ಠಾನದ ಬಗ್ಗೆ ಮುಂದಿನ ಕ್ರಮ ವಹಿಸಲಾಗುವುದು. |

**TOR 191 TDV 2025**

(ಎಚ್.ಕೆ.ಪಾಟೀಲ್)
ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ
ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು